1589 (1713) ಶ್ರೀ ಲಾಲಾಜಿ ಆರ್ ಮೆಂಡನ್ [ಕಾಪು] – ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಸರ್ಕಾರಿ ಶಿಕ್ಷಕರ ಮತ್ತು ಶಿಕ್ಷಕೇತರ ಬಡ್ತಿ ನಿಯಮ ಒಂದೇ ರೀತಿಯಲ್ಲಿ ತರುವುದಕ್ಕೆ ಕಾನೂನಿನ ತೊಡಕಿದೆಯೇ,

ಆ) ಹಾಗಿದ್ದಲ್ಲಿ, 2007–08ನೇ ಸಾಲಿನಿಂದ ಆದೇಶಿಸಲಾಗುವುದೇ?

ಶ್ರೀ ಬಿ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು)

ಅ) ಹೌದು ವೃಂದ ಮತ್ತು ನೇಮಕಾತಿ ಹಾಗೂ ಬಡ್ತಿ ನಿಯಮಗಳು ಬೇರೆ ಬೇರೆಯಾಗಿರುತ್ತದೆ

ಆ) ವೃಂದ ಮತ್ತು ನೇಮಕಾತಿ ಹಾಗೂ ಬಡ್ತಿ ನಿಯಮಗಳು ಬೇರೆ ಬೇರೆಯಾಗಿರುವುದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ

1591 (1715) ಶ್ರೀ ಲಾಲಾಜಿ ಆರ್ ಮೆಂಡನ್ (ಕಾಪು) – ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಾಪು ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರಿ ಹಾಗೂ ಖಾಸಗಿ ಪಾಲಿಟೆಕ್ನಿಕ್ ಕಾಲೇಜ್ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹೌದಾದಲ್ಲಿ, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಮೆಕ್ಯಾನಿಕಲ್, ಇಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ವಿಷಯಗಳ ವಿಭಾಗಗಳಿಗೂ ಮಂಜೂರಾತಿ ನೀಡಲಾಗುವುದೇ?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಹೌದು

ಆ) ಮುಂದಿನ ಆರ್ಥಿಕ ವರ್ಷದಲ್ಲಿನ ಆಯವ್ಯಯವನ್ನು ಗಮನದಲ್ಲಿಟ್ಟುಕೊಂಡು ಕಾಪು ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಪ್ರಾರಂಭಿಸಲು ಪರಿಶೀಲಿಸಲಾಗುವುದು